ಡೆಕ್ಕನ್ ಹೆರಾಲ್ಡ್ 7-3-24

# Historic Appa Kere set to open for public

**Lake area has been developed as a plastic-free zone**

KALABURAGI, DHNS



**A picturesque view of the renovated park of Appa Kere in Kalaburagi.** DH PHOTO

The inauguration of the renovated Sharanabasaveshwara Lake garden, popularly known as 'Appa Kere situated in the heart of the City, will be held on March 7.

District In-charge Minister Priyank Kharge will open it for the public.

The tranquil ambiance of this charming lake, once a favoured retreat for locals, had suffered a decline due to various factors including repercussions of Covid pandemic. Sharanabasaveshwara Lake Management Authority (SBLMA) undertook the task of rejuvenating the lake's surroundings. The aim is to transform it into a preferred recreational spot for citizens and actively contribute to biodiversity conservation. Now, adorned with verdant landscapes and new features in the lake garden, the revitalised lake beckons visitors to explore and revel in its beauty.

The lake garden now boasts of food court, play zone, and boating facilities. Moreover, the area has been enriched with the establishment of a nursery, Brundavan Nursery, where environmental enthusiasts can purchase plants and saplings. Drawing a diverse array of bird species from both the country and abroad. The lake provides a captivating spectacle of birds frolicking in the water and seeking refuge in the surrounding trees and bushes.

To facilitate the observation of this unique avian diversity, a Bird Observation Tower has been constructed. For the amusement of children, the Muakaan, train adds to the attraction, offering joyous journeys around the park. Additionally, boating and leisurely walks along the park's jetty provide delightful experiences for all visitors.

The lake provides a distinctive boating experience with the availability of both mechanized boats and pedal boating facilities.

Navigating these boats around the lake captivates visitors, providing an exceptional chance to discover the surroundings. Specifically designed for children, there is a designated play area featuring a range of recreational activities. An open-air theater equipped with a music system serves as a platform for cultural groups and children to showcase their talent. A dedicated space for yoga enthusiasts has been allocated.

"The lake park has undergone a revitalisation, transforming into a beautiful space that provides a serene environment for leisure and enjoyment. Adorned with decorative lights throughout, the entire lake area now exudes traditional charm. Emphasising its commitment to being environmentally conscious, the area has been developed as a plastic-free zone, making it an ideal spot for nature lovers to relish," said Regional Commissioner Krishna Bajpai, who is also the chairman of SBLMA.

Scanned with OKEN Scanner

7-3-24

# ಇಂದು ಶ್ರೀ ಶರಣಬಸವೇಶ್ವರ ಕೆರೆ ಉದ್ಯಾನವನದ ಪುನರ್ ನವೀಕರಣದ ಉದ್ಘಾಟನೆ

**ಕಲಬುರಗಿ**

ಕಲಬುರಗಿ ಶರಣಬಸವೇಶ್ವರ ಕೆರೆ ನಿರ್ವಹಣಾ ಪ್ರಾಧಿಕಾರದ ವತಿಯಿಂದ ಶ್ರೀ ಶರಣಬಸವೇಶ್ವರ ಕೆರೆ ಉದ್ಯಾನವನದ ಪುನರ್ ನವೀಕರಣದ ಉದ್ಘಾಟನಾ ಸಮಾರಂಭವನ್ನು ಮಾರ್ಚ್ 7 ರಂದು ಗುರುವಾರ ಬೆಳಿಗ್ಗೆ 10 ಗಂಟೆಗೆ ಕಲಬುರಗಿ ಶ್ರೀ ಶರಣಬಸವೇಶ್ವರ ಕೆರೆ ಉದ್ಯಾನವನದಲ್ಲಿ ಹಮ್ಮಿಕೊಳ್ಳಲಾಗಿದೆ.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಘನ ಉಪಸ್ಥಿತಿ ಹಾಗೂ ನವೀಕರಿಸಬಹುದಾದ ಇಂಧನ ಮೂಲ, ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ಕೇಂದ್ರ ಸರ್ಕಾರದ ರಾಜ್ಯ ಸಚಿವರು ಹಾಗೂ ಬೀದರ ಸಂಸದರಾದ ಭಗವಂತ ಖೂಬಾ ಅವರು ಗೌರವ ಉಪಸ್ಥಿತಿ ವಹಿಸುವರು.

ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆಅವರು ಶ್ರೀ ಶರಣಬಸವೇಶ್ವರ ಕೆರೆ ಉದ್ಯಾನವನದ ಪುನರ್ ನವೀಕರಣವನ್ನು ಉದ್ಘಾಟಿಸುವರು.

ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಇಲಾಖೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಆಳಂದ ಶಾಸಕರು ಹಾಗೂ ಮುಖ್ಯಮಂತ್ರಿಗಳ ಸಲಹೆಗಾರರಾದ ಬಿ.ಆರ್. ಪಾಟೀಲ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್ ಹಾಗೂ ಕಲಬುರಗಿ ಉತ್ತರ ಮತಕ್ಷೇತ್ರದ ಶಾಸಕರು ಹಾಗೂ ಕರ್ನಾಟಕ ರೇಷ್ಮೆ ಉದ್ಯಮಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಕನೀಜ್ ಫಾತೀಮಾ ಹಾಗೂ ಕಲಬುರಗಿ ಲೋಕಸಭಾ ಸದಸ್ಯ ಡಾ.ಉಮೇಶ ಜಿ. ಜಾಧವ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಶಾಸಕರುಗಳಾದ ಎಂ.ವೈ. ಪಾಟೀಲ, ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ ಹಾಗೂ ವಿಧಾನ ಪರಿಷತ್ ಶಾಸಕರುಗಳಾದ ಸುನೀಲ್ ವಲ್ಯಾಪುರೆ, ಶಶೀಲ ಜಿ. ನಮೋಶಿ, ಡಾ. ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ಡಾ. ಸಾಬಣ್ಣ ತಳವಾರ, ತಿಮ್ಮಣ್ಣಪ್ಪ ಕಮಕನೂರ ಹಾಗೂ ಮಹಾನಗರ ಪಾಲಿಕೆ ಮಹಾಪೌರ ವಿಶಾಲ ಎಸ್. ದರ್ಗಿ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜರ್ ಖಾನ್, ಕಾಡಾ ಅಧ್ಯಕ್ಷ ಡಾ. ಅಬ್ದುಲ್ ರಶೀದ್ ಹಾಗೂ ಕಲಬುರಗಿ, ಬೀದರ ಹಾಗೂ ಯಾದಗಿರಿ ಜಿಲ್ಲಾ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತದ ಅಧ್ಯಕ್ಷ ರಾಮಚಂದ್ರ ಪಾಟೀಲಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತ ಹಾಗೂ ಶರಣಬಸವೇಶ್ವರ ಕೆರೆ ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಕೃಷ್ಣ ಬಾಜಪೇಯಿ, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಅಜಯ ಹಿಲೋರಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ಎಂ. ಸುಂದರೇಶ ಬಾಬು,ಕಲಬುರಗಿ ನಗರ ಪೊಲೀಸ್ ಆಯುಕ್ತ ಚೇತನ್ ಆರ್., ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಪಾಟೀಲ ಭುವನೇಶ ದೇವಿದಾಸ್ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಕ್ಷಯ ಎಂ.ಹಾಕೆ ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

ಯುವರಂಗ 7-3-24

ಯುವರಂಗ ಪ್ರಾದೇಶಿಕ ಕನ್ನಡ ದಿನ ಪತ್ರಿಕೆ

## ಇಂದು ಶ್ರೀ ಶರಣಬಸವೇಶ್ವರ ಕೆರೆ ಉದ್ಯಾನವನದ

# ಪುನರ್ ನವೀಕರಣದ ಉದ್ಘಾಟನೆ

ಕಲಬುರಗಿ,ಮಾ.06.- ಕಲಬುರಗಿ ಶರಣಬಸವೇಶ್ವರ ಕೆರೆ ನಿರ್ವಹಣಾ ಪ್ರಾಧಿಕಾರದ ವತಿಯಿಂದ ಶ್ರೀ ಶರಣಬಸವೇಶ್ವರ ಕೆರೆ ಉದ್ಯಾನವನದ ಪುನರ್ ನವೀಕರಣದ ಉದ್ಘಾಟನಾ ಸಮಾರಂಭವನ್ನು ಮಾರ್ಚ್ 7 ರಂದು ಗುರುವಾರ ಬೆಳಿಗ್ಗೆ 10 ಗಂಟೆಗೆ ಕಲಬುರಗಿ ಶ್ರೀ ಶರಣಬಸವೇಶ್ವರ ಕೆರೆ ಉದ್ಯಾನವನದಲ್ಲಿ ಹಮ್ಮಿಕೊಳ್ಳಲಾಗಿದೆ.

ರಾಜ್ಯಸಭೆಯ ವಿರೋಧಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಘನ ಉಪಸ್ಥಿತಿ ಹಾಗೂ ನವೀಕರಿಸಬಹುದಾದ ಇಂಧನ ಮೂಲ, ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ಕೇಂದ್ರ ಸರ್ಕಾರದ ರಾಜ್ಯ ಸಚಿವರು ಹಾಗೂ ಬೀದರ ಸಂಸದರಾದ ಭಗವಂತ ಖೂಬಾ ಅವರು ಗೌರವ ಉಪಸ್ಥಿತಿ ವಹಿಸುವರು.

ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಶ್ರೀ ಶರಣಬಸವೇಶ್ವರ ಕೆರೆ ಉದ್ಯಾನವನದ ಪುನರ್ ನವೀಕರಣವನ್ನು ಉದ್ಘಾಟಿಸುವರು.

ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಇಲಾಖೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಆಳಂದ ಶಾಸಕರು ಹಾಗೂ ಮುಖ್ಯಮಂತ್ರಿಗಳ ಸಲಹೆಗಾರರಾದ ಬಿ.ಆರ್. ಪಾಟೀಲ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್ ಹಾಗೂ ಕಲಬುರಗಿ ಉತ್ತರ ಮತಕ್ಷೇತ್ರದ ಶಾಸಕರು ಹಾಗೂ ಕರ್ನಾಟಕ ರೇಷ್ಮೆ ಉದ್ಯಮಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಕನೀಜ್ ಫಾತೀಮಾ ಹಾಗೂ ಕಲಬುರಗಿ ಲೋಕಸಭಾ ಸದಸ್ಯ ಡಾ.ಉಮೇಶ ಜಿ. ಜಾಧವ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಶಾಸಕರುಗಳಾದ ಎಂ.ವೈ. ಪಾಟೀಲ, ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ ಹಾಗೂ ವಿಧಾನ ಪರಿಷತ್ ಶಾಸಕರುಗಳಾದ ಸುನೀಲ್ ವಲ್ಯಾಪುರೆ, ಶಶೀಲ ಜಿ.ನಮೋಶಿ, ಡಾ.ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ-ಹುಮನಾಬಾದ, ಡಾ. ಸಾಬಣ್ಣ ತಳವಾರ, ತಿಮ್ಮಣ್ಣಪ್ಪ ಕಮಕನೂರ ಹಾಗೂ ಮಹಾನಗರ ಪಾಲಿಕೆ ಮಹಾಪೌರ ವಿಶಾಲ ಎಸ್. ದರ್ಗಿ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜರ್ ಖಾನ್, ಕಾಡಾ ಅಧ್ಯಕ್ಷ ಡಾ. ಅಬ್ದುಲ್ ರಶೀದ್ ಹಾಗೂ ಕಲಬುರಗಿ, ಬೀದರ ಹಾಗೂ ಯಾದಗಿರಿ ಜಿಲ್ಲಾ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತದ ಅಧ್ಯಕ್ಷ ರಾಮಚಂದ್ರ ಪಾಟೀಲ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತ ಹಾಗೂ ಶರಣಬಸವೇಶ್ವರ ಕೆರೆ ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಕೃಷ್ಣ ಬಾಜಪೇಯಿ, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪಮಹಾನಿರೀಕ್ಷಕ ಅಜಯ ಹಿಲೋರಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ಎಂ. ಸುಂದರೇಶ ಬಾಬು, ಕಲಬುರಗಿ ನಗರ ಪೊಲೀಸ್ ಆಯುಕ್ತ ಚೇತನ್ ಆರ್., ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಪಾಟೀಲ ಭುವನೇಶ ದೇವಿದಾಸ್ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಕ್ಷಯ ಎಂ.ಹಾಕೆ ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

Scanned with OKEN Scanner

ಕರ್ನಾಟಕ ಸಂಧ್ಯಾಕಾಲ 7-3-24



# ನಾಳೆ ಶರಣಬಸವೇಶ್ವರ ಕೆರೆ ಪುನರ್ ನವೀಕರಣ ಕಾಮಗಾರಿಗೆ ಚಾಲನೆ

ಕಲಬುರಗಿ: ಕಲಬುರಗಿ ಹೃದಯ ಭಾಗದಲ್ಲಿರುವ ಶ್ರೀ ಶರಣಬಸವೇಶ್ವರ ಕೆರೆ ನಿರ್ವಹಣಾ ಪ್ರಾಧಿಕಾರದ "ಅಪ್ಪನ ಕೆರೆ" ಎಂದೇ ಪ್ರಸಿದ್ಧಿ ಹೊಂದಿರುವ ಶರಣಬಸವೇಶ್ವರ ಕೆರೆ ಆವರಣದಲ್ಲಿ ಕೈಗೊಂಡ ಪುನರ್ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನಾ ಸಮಾರಂಭವು ಇದೇ ಮಾರ್ಚ್ ೭ ರಂದು ಬೆಳಿಗ್ಗೆ ೧೦ ಗಂಟೆಗೆ ಜರುಗಲಿದೆ ಎಂದು ಕಲಬುರಗಿ ಶ್ರೀ ಶರಣಬಸವೇಶ್ವರ ಕೆರೆ ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಕೃಷ್ಣ ಬಾಜಪೇಯಿ ಅವರು ತಿಳಿಸಿದ್ದಾರೆ.

ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಐ.ಟಿ.ಬಿ.ಟಿ. ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಶರಣಬಸವೇಶ್ವರ ಕೆರೆ ಪುನರ್ ನವೀಕರಣ ಕಾಮಗಾರಿಗಳನ್ನು ಉದ್ಘಾಟಿಸುವರು.

ಇದೇ ಸಂದರ್ಭದಲ್ಲಿ ಕೆರೆ ಆವರಣಕ್ಕೆ ಆಗಮಿಸುವ ದೇಶ ವಿದೇಶದ ಅತಿಥಿ ಪಕ್ಷಿ ಸಂಕುಲಗಳ ಪೂರ್ಣ ಮಾಹಿತಿ ನೀಡುವ ಪಕ್ಷಿ ಶಾಸ್ತ್ರಜ್ಞ, ನಿಸರ್ಗ ತಜ್ಞ ಡಾ.ಶಂಕರಪ್ಪ ಹತ್ತಿ ಅವರು ಬರೆದ ಕನ್ನಡ-ಇಂಗ್ಲೀಷ್ ಆವೃತ್ತಿಯ ಪುಸ್ತಕದ ಲೋಕಾರ್ಪಣೆ ಕಾರ್ಯಕ್ರಮ ನಡೆಯಲಿದೆ. ಜೊತೆಗೆ ಶರಣಬಸವೇಶ್ವರ ಕೆರೆಯ ವೆಬ್‌ಸೈಟ್‌ನ್ನು ಸಹ ಲೋಕಾರ್ಪಣೆ ಮಾಡಲಾಗುತ್ತದೆ. ಈ ಸಂದರ್ಭದಲ್ಲಿ ಜಿಲ್ಲೆಯ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಗಣ್ಯರ ಉಪಸ್ಥಿತರಿರುವರು.

ಹಸಿರು ಉದ್ಯಾನವಲಯದಡಿ ಅಭಿವೃದ್ಧಿ ಪಡಿಸಿದ ಪರಿಸರ ಪ್ರಿಯ ಕೆರೆ ಆವರಣದಲ್ಲಿ ಕೆಲವು ವರ್ಷಗಳ ಹಿಂದೆ ಮನರಂಜನೆಯ ಮನೋಹರ ತಾಣವಾಗಿದ್ದ ಕೆರೆಯ ಆವರಣವು ಕೋವಿಡ್ ಸಂದರ್ಭದಲ್ಲಿ ಪಾಳುಬಿದ್ದು ಶಿಥಿಲಾವಸ್ಥೆಗೆ ಬಂದಿತ್ತು. ಆದರೆ ಪ್ರಸ್ತುತ ಶ್ರೀ ಶರಣಬಸವೇಶ್ವರ ಕೆರೆ ನಿರ್ವಹಣಾ ಪ್ರಾಧಿಕಾರಕ್ಕೆ ಜಿಲ್ಲಾ ಉಸ್ತುವಾರಿ ಸಚಿವರ ನಿರ್ದೇಶನದಡಿ ಕೆರೆ ಆವರಣವನ್ನು ಪ್ರವಾಸಿ ತಾಣವಾಗಿ ಪರಿಸರ ಸಂರಕ್ಷಣೆಯ ಭಾಗವಾಗಿ ಅಭಿವೃದ್ದಿಪಡಿಸಿದ್ದು, ಈಗ ನಳನಳಿಸುವ ಉದ್ಯಾನವನ್ನಾಗಿ ತಲೆ ಎತ್ತಿ ನಿಂತಿದೆ. ಹಸಿರು ನೆಲಹಾಸುಗಳಿಂದ ಶೃಂಗಾರಗೊಂಡ ಆವರಣ ಹಚ್ಚುಹಸುರಾಗಿ ಪ್ರವಾಸಿಗರನ್ನು ಕೈಬಿಸಿ ಕರೆಯುತ್ತಿದೆ. ಇಲ್ಲಿ ಬೃಂದಾವನ ನರ್ಸರಿ ಅಭಿವೃದ್ಧಿಪಡಿಸಲಾಗಿದ್ದು, ಭೇಟಿ ನೀಡಿದ ಪರಿಸರ ಪ್ರೇಮಿಗಳಿಗೆ ಗಿಡ, ಸಸ್ಯಗಳ ಖರೀದಿಗೆ ಅವಕಾಶ ಕಲ್ಪಿಸಲಾಗಿದೆ. ದೇಶ ವಿದೇಶಗಳಿಂದ



ಕೆರೆ ಆವರಣಕ್ಕೆ ಆಗಮಿಸುವ ವಿನೂತನ ವರ್ಗಗಳ ಪಕ್ಷಿಗಳು ಕೆರೆಯ ನಡುಗಡ್ಡೆ ಮತ್ತು ದಂಡೆಯಲ್ಲಿ ಆಶ್ರಯ ಪಡೆದು ಸ್ವಚ್ಛಂದ ಜೀವನ-ವಿಹಾರ ಮಾಡುವ ಅಪೂರ್ವ ನೋಟ ಕಣ್ಮನ ಸೆಳೆಯುತ್ತದೆ.

ಇಂತಹ ಅಪೂರ್ವ ವೈವಿಧ್ಯ ಪಕ್ಷಿಗಳನ್ನು ನೋಡಿ ಕಣ್ತುಂಬಿಕೊಳ್ಳಲು 'ಪಕ್ಷಿ ವೀಕ್ಷಣಾ ಗೋಪುರ'ವು ಸಿದ್ಧಗೊಂಡಿದೆ. ಮಕ್ಕಳ ಮನ ರಂಜನೆಗಾಗಿ 'ಮುಸ್ಕಾನ್ ಪುಟಾಣಿ ರೈಲು' ಇನ್ನೊಂದು ಪ್ರಮುಖ ಆಕರ್ಷಣೆಯಾಗಿದ್ದು, ಉದ್ಯಾನ ಸುತ್ತ ಪರ್ಯಟನೆ ಮಾಡಿ ದೋಣಿ ವಿಹಾರದ ಜೆಟ್ಟಿವರೆಗೆ ಅಹ್ಲಾದಕರ ಪ್ರಯಾಣದ ಸವಿಯನ್ನುಣ್ಣುವ ಅವಕಾಶವಿದೆ.

ಕೆರೆಯಲ್ಲಿ ದೋಣಿ ವಿಹಾರದ ಅಪೂರ್ವ ಅನುಭವ ಸವಿಯಲು ಯಾಂತ್ರಿಕ ದೋಣಿಗಳು ಮತ್ತು ಪೆಡೆಲ್ ಬೋಟಿಂಗ್ ಸಜ್ಜಾಗಿ ನಿಂತಿವೆ. ಕೆರೆಯ ಸುತ್ತ ವಿಹಾರ ಮಾಡಲು ದೋಣಿಗಳು ಪ್ರವಾಸಿಗರನ್ನು ಆಕರ್ಷಿಸುತ್ತಿದೆ. ಮಕ್ಕಳಿಗಾಗಿ ಒಳ ಕ್ರಿಡಾಂಗಣ ಆಟದ ಮೋಜಾಮಸ್ತಿ ವ್ಯವಸ್ಥೆ ಸಿದ್ಧಗೊಂಡಿದೆ. ಮಕ್ಕಳು ಹಾಗೂ ಸಾಂಸ್ಕೃತಿಕ ತಂಡಗಳು ತಮ್ಮ ಪ್ರತಿಭಾ ಪ್ರದರ್ಶನಕ್ಕಾಗಿ ಬಯಲು ರಂಗಮಂದಿರ ಹಾಗೂ ಮ್ಯೂಸಿಕ್ ಸಿಸ್ಟಂ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

ಯೋಗಪಟುಗಳಿಗಾಗಿ ಯೋಗ ಮಾಡಲು ಪ್ರತ್ಯೇಕ ಜಾಗ ಕಾಯ್ದಿರಿಸಲಾಗಿದೆ. ಪ್ರವಾಸಿಗರಿಗೆ ಉತ್ತಮ ಪಾನಿಯ ಹಾಗೂ ನಂದಿನಿ ಉತ್ಪನ್ನ ಪೂರೈಕೆಗಾಗಿ ನಂದಿನಿ ಸ್ಟಾಲ್, ಶುಚಿರುಚಿ ತಿಂಡಿ ತಿನಸು ಲಭ್ಯವಾಗಲು ಕೆಫೆಟೇರಿಯಾ ಹಾಗೂ ಲಘು ಉಪಹಾರ ಗೃಹಗಳು ಸೇವೆಗೆ ಸಿದ್ಧಗೊಂಡಿದೆ. ಕೆರೆಯ ಉದ್ಯಾನ, ಆವರಣ ಮನೋಲ್ಲಾಸ ನೀಡುವ ಪ್ರಕೃತಿ ರಮಣಿಯತೆ ಸವಿಯುವ ಸುಂದರ ತಾಣವಾಗಿ ಪುನರ್ ನವೀಕರಿಸಲಾಗಿದೆ.

ವಿದ್ಯುದ್ದೀಪಗಳಿಂದ ಇಡೀ ಕೆರೆ ಆವರಣ ಝಗಮಗಿಸುವಂತೆ ಶೃಂಗರಿಸಲಾಗಿದೆ. ಪೂರ್ಣ ಪ್ಲಾಸ್ಟಿಕ್ ಮುಕ್ತ ಪ್ರದೇಶವಾಗಿ ಪ್ರಕೃತಿ ಸ್ನೇಹಿ ಕೆರೆಯಾಗಿ ಈಗ ಅಭಿವೃದ್ಧಿ ಪಡಿಸಲಾಗಿದೆ.

ಇಡೀ ಶರಣಬಸವೇಶ್ವರ ಕೆರೆ ಪುನರ್ ನವೀಕರಣದ ಮಹತ್ವಾಕಾಂಕ್ಷಿ ಯೋಜನೆಯು ನಗರ ಮಧ್ಯೆ ಇರುವ ಪ್ರಕೃತಿ ರಮಣೀಯ ತಾಣ ಮತ್ತೆ ಗತವೈಭವವನ್ನು ಸಾರಲು ಸಜ್ಜಾಗಿದೆ. ಪ್ರಕೃತಿ ಸ್ನೇಹಿ ಶರಣಬಸವೇಶ್ವರ ಕೆರೆ ಪುನರ ನವೀಕರಣ ಉದ್ಘಾಟನೆ ಕಾರ್ಯಕ್ರಮಕ್ಕೆ ಸಾರ್ವಜನಿಕರಿಗೆ ಮುಕ್ತ ಪ್ರವೇಶವಿದೆ. ಸಾರ್ವಜನಿಕರು ಈ ಕಾರ್ಯಕ್ರಮಕ್ಕೆ ಬಂದು ಪರಿಸರ ಪ್ರೀತಿಯ ಕೆರೆ ಅಭಿವೃದ್ಧಿ ಯೋಜನೆಯ ಕಾರ್ಯಕ್ರಮಕ್ಕೆ ಸಾಕ್ಷಿಯಾಗಬೇಕೆಂದು ಅವರು ತಿಳಿಸಿದ್ದಾರೆ.

Scanned with OKEN Scanner